ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಗುಂಡ್ಲುಪೇಟೆ ತಾಲ್ಲೂಕು ಬೇಗೂರು ಕೆರೆಗೆ ಕೊಳಚೆ ನೀರು ಹರಿಯದಂತೆ ತಡೆಗಟ್ಟುವ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

371 (441) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಂಡ್ಲುಪೇಟೆ ತಾಲ್ಲೂಕು, ಬೇಗೂರು ಕೆರೆಗೆ ಕೊಳಚೆ ನೀರು ಸೇರಿ ದುರ್ವಾಸನೆ ಬರುತ್ತಿರುವುದು, ಕ್ರಿಮಿಕೀಟಗಳ ಹಾವಳಿಯಿಂದ ಜನರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೆರೆ ಸಮೀಪ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಬಸ್ ನಿಲ್ದಾಣ, ಚುಜ್ಜಲಪ್ಪನ ದೇವಾಲಯದವರೆಗೆ ದುರ್ವಾಸನೆ ಬರುತ್ತಿದ್ದು, ಜನಗಳ ಆರೋಗ್ಯದ ಮೇಲೆ ಪರಿಣಾಮ ಬೀರುವುದರಿಂದ, ಕೊಳಚೆ ನೀರು ಕೆರೆಗೆ ಹರಿಯದಂತೆ ತಡೆಗಟ್ಟಲಾಗುವುದೇ; ಹಾಗೂ ಕೆರೆಯನ್ನು ಪುನಶ್ಚೇತನಗೊಳಿಸಿ, ಹೊಸದಾಗಿ ನದಿ ಮೂಲದಿಂದ ನೀರು ತುಂಬಿಸಲಾಗುವುದೇ?